# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಸರ್ಕಾರಿ ನೌಕರರಾದ ಶ್ರೀ ಹೊನ್ನೆಶಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ರಂಗಾಪುರ ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ ರವರು ಕರ್ತವ್ಯಲೋಪ/ದುರ್ವರ್ತನೆ ಎಸಗಿರುವ ಬಗ್ಗೆ.

**ಓದಲಾಗಿದೆ:** 1. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರ ಅಸಪ ಸಂಖ್ಯೆ : D.O.No.Compt/Uplok/BD/2899/2016/ARLO-2, ದಿನಾಂಕ: 20-04-2017.

2. ಮಾನ್ಯ ಉಪಲೋಕಾಯಕ್ತರವರ ವರದಿ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಬಿಡಿ-2899/2016/ಸನಿಕಾಸ-2, ದಿನಾಂಕ: 28-03-2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ದಿನಾಂಕ:20-04-2017 ರವರ ಪತ್ರದೊಂದಿಗೆ ಕನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 9 ರನ್ವಯ ಮಾನ್ಯ ಉಪಲೋಕಾಯುಕ್ತರವರು ಸಲ್ಲಿಸಿರುವ ವರದಿಯಲ್ಲಿ ಶ್ರೀಮತಿ ಲಕ್ಷ್ಮಮ್ಮ, ಕೊಲ್ಲಹಳ್ಳಿ ಗ್ರಾಮ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ಶ್ರೀ ಹೊನ್ನೆಶಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ರಂಗಾಪುರ ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ (ಇನ್ನು ಮುಂದೆ "ಎದುರುದಾರರು" ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ದೂರು ದಾಖಲಿಸಿಕೊಂಡು ತನಿಖೆ ತೆಗೆದುಕೊಂಡಾಗ ಈ ಕೆಳಗೆ ಹೇಳಿದ ಸಂಗತಿಗಳು ಮೇಲ್ನೋಟಕ್ಕೆ ಕಂಡು ಬರುತ್ತದೆ.

**ದೂರಿನ ಸಂಕ್ಷಿಪ್ತ ವಿವರಣೆ:**

ದೂರುದಾರರು ತಮ್ಮ ದೂರಿನಲ್ಲಿ ಮಧುಗಿರಿ ತಾಲ್ಲೂಕು ಕುನ್ನಹಳ್ಳಿ ಗ್ರಾಮದ ದೂರುದಾರರು ದೌರ್ಜನ್ಯಕ್ಕೊಳಗಾದ ಮಹಿಳೆಯಾಗಿದ್ದು, ಇವರಿಗೆ ವಾಸಿಸಲು ಯಾವುದೇ ಸ್ವಂತ ಮನೆ ಇರುವುದಿಲ್ಲ. ಆ ಕಾರಣದಿಂದ ಇವರನ್ನು ಗ್ರಆಮ ಸಭೆಯಲ್ಲಿ ಆಶ್ರಯ ಯೋಜನೆಯ ಫಲಾನುಭವಿಯಾಗಿ ಆಯ್ಕೆ ಮಾಡಿದ್ದು ಇರುತ್ತದೆ. ಆನಂತರ ಇವರ ಹೆಸರನ್ನು ಕೈಬಿಟ್ಟು ಬೇರೆಯವರ ಹೆಸರನ್ನು ಫಲಾನುಭವಿಯಾಗಿ ಸೇರಿಸಿ ಇವರನ್ನು ಅವಕಾಶವಂಚಿತರನ್ನಾಗಿ ಮಾಡಿರುತ್ತಾರೆ. ಎದುರುದಾರರಿಗೆ ಈ ಬಗ್ಗೆ ಕ್ರಮಕೈಗೊಳ್ಳಲು ಅರ್ಜಿ ಸಲ್ಲಿಸಿದರೂ ಸಹ ಯಾವುದೇ ಕ್ರಮಕೈಗೊಂಡಿರುವುದಿಲ್ಲ. ಆದ್ದರಿಂದ ಎದುರುದಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ದೂರು ಸಲ್ಲಿಸಿದ್ದಾರೆ.

ಎದುರುದಾರರಿಗೆ ಈ ಕಛೇರಿಯಿಂದ ನೋಟಿಸು ಕಳುಹಿಸಿದಾಗ ಅದು ಎದುರುದಾರರಿಗೆ ಜಾರಿಯಾದ ಬಗ್ಗೆ ಸ್ವೀಕೃತಿ ಬಂದಿರುತ್ತದೆ. ಆದರೆ ಅವರು ತಮ್ಮ ಆಕ್ಷೇಪಣೆಯಲ್ಲಿ ಸಲ್ಲಿಸಿರುವುದಿಲ್ಲ. ಆದ್ದರಿಂದ ಎದುರುದಾರರ ಆಕ್ಷೇಪಣೆ ಇಲ್ಲವೆಂದು ಪರಿಗಣಿಸಲಾಗಿರುತ್ತದೆ.

ದೂರುದಾರರು ಹಾಜರುಪಡಿಸಿದ ದುರು ಮತ್ತು ದಾಖಲಾತಿಗಳನ್ನು ಪರಿಶೀಲಿಸಿದಾಗ, ದೂರುದಾರರು ದೌರ್ಜನ್ಯಕ್ಕೊಳಗಾದ ಮಹಿಳೆಯೆಂದು ದಿ: 17-07-2013 ರಂದು ನಡೆದ ಗ್ರಾಮಸಭೆಯಲ್ಲಿ ಈ ರೀತಿ ವಿಶೇಷ ವರ್ಗಕ್ಕೆ ಸೇರಿದ ವ್ಯಕ್ತಿಗಳಿಗೆ ರಂಗಾಪುರ ಪಂಚಾಯತಿಯಿಂದ ಆಶ್ರಯ ಯೋಜನೆಯಡಿ ಫಲಾನುಭವಿಯಾಗಿ ಆಯ್ಕೆಮಾಡಿ ಪಟ್ಟಿ ಲಭ್ಯವಿರುತ್ತದೆ. ಈ ಪಟ್ಟಿಯಲ್ಲಿ ದೂರುದಾರರ ಹೆಸರು ಕ್ರಮಸಂಖ್ಯೆ 1 ರಲ್ಲಿ ನಮೂದಾಗಿದ್ದು, ಇವರ ಹೆಸರಿನಲ್ಲಿ ಪಡಿತರ ಚೀಟಿ, ಕುನ್ನಹಳ್ಳಿ ಗ್ರಾಮದ ವಾಸಸ್ಥಳ ದೃಢೀಕರಣ ಪತ್ರ, ಆದಾಯ ಮತ್ತು ಜಾತಿ ಪ್ರಮಾಣ ಪತ್ರ, ಆಧಾರ ಕಾರ್ಡ, ಚುನಾವಣಾ ಗುರುತಿನ ಚೀಟಿ ಲಗತ್ತಿಸಿರುತ್ತಾರೆ. ಇವುಗಳನ್ನು ಪರಿಶೀಲಿಸಿದಾಗ ದೂರುದಾರರು ಕುನ್ನಹಳ್ಳಿ ಗ್ರಾಮದ ಕಾಯಂ ನಿವಾಸಿಯಾಗಿರುವುದರಿಂದ ಹಾಗೂ ದೌರ್ಜನ್ಯಕ್ಕೊಳಗಾದ ಮಹಿಳೆಯಾದ್ದರಿಂದ ಆಶ್ರಯ ಯೋಜನೆ ಫಲಾನುಭವಿಯಾಗಲು ಅರ್ಹರಾಗಿದ್ದಾರೆಂದು ಕಂಡುಬರುತ್ತದೆ.

ದಿ: 15-09-2015 ರಂದು ದೂರುದಾರರು ಎದುರುದಾರರಿಗೆ ಅರ್ಜಿ ಸಲ್ಲಿಸಿ ತನ್ನನ್ನು ಆಶ್ರಯ ಯೋಜನೆ ಫಲಾನುಭವಿಯಾಗಿ ಪರಿಗಣಿಸಬೇಕೆಂದು ಕೇಳಿಕೊಂಡಾಗ ಅದಕ್ಕೆ ಎದುರದಾರರು ಯಾವುದೇ ರೀತಿ ಸ್ಪಂದನೆ ದೊರೆತ್ತಿಲ್ಲದಿರುವುದು ಕಂಡುಬರುತ್ತದೆ. ದೂರುದಾರರ ಹೆಸರಿನಲ್ಲಿ ಖಾಲಿ ನಿವೇಶನವಿದ್ದು, ಅದರಲ್ಲಿ ಮನೆಯನ್ನು ಕಟ್ಟಿಕೊಳ್ಳಲು ಅವರಿಗೆ ಆರ್ಥಿಕ ಸಹಾಯ ಬೇಕಾಗಿರುವುದು ಕಂಡುಬರುತ್ತದೆ. ಎದುರುದಾರರು ಇಂತಹ ಅರ್ಹ

ಪ್ರಕರಣಗಳ ಬಗ್ಗೆ ಯಾವುದೇ ಗಮನನಿಡದೇ ಹಾಗೂ ಅವರಿಗೆ ಸೂಕ್ತ ನ್ಯಾಯ ದೊರಕಿಸಿಕೊಡದೆ ಕರ್ತವ್ಯಲೋಪವೆಸಗಿದ್ದಾರೆಂದು ಕಂಡುಬರುತ್ತದೆ.

ಆದ್ದರಿಂದ. ಶ್ರೀ ಹೊನ್ನೆಶಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ರಂಗಾಪುರ ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ ರವರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966ರ ನಿಯಮ 3(1) (i) ಮತ್ತು (ii) ರ ಅಡಿಯಲ್ಲಿ ದುರ್ನಡತೆ/ ದುರ್ವತನೆ ಕಂಡು ಬಂದಿರುವುದರಿಂದ, ಸದರಿಯವರ ವಿರುದ್ಧ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3)ರ ಅಡಿ ಪ್ರದತ್ತವಾದ ಅಧಿಕಾರದಡಿ, ಈ ವರದಿ ಮೂಲಕ, ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ, ಹಾಗೂ ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕಣ, ನಿಯಂತ್ರಣ ಮತ್ತು ಮೆಲ್ಮನವಿ) ನಿಯಮಾವಳಿ 1957 ನಿಯಮ 14(ಎ) ರಡಿ ಈ ಸಂಸ್ಥೆಗೆ ವಹಿಸಬೇಕೆಂದೂ ಕೋರಿದೆ.

ಶ್ರೀ ಹೊನ್ನೆಶಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ರಂಗಾಪುರ ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/388/ಗ್ರಾಪಂಕಾ/2017 ಬೆಂಗಳೂರು, ದಿನಾಂಕ: 08-05-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಹೊನ್ನೆಶಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ರಂಗಾಪುರ ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ ಇವರ ವಿರುದ್ಧದ ಆಪಾದನೆಗಳ ಬಗ್ಗೆ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ 14(ಎ) ಅಡಿಯಲ್ಲಿ ಈ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಇವರಿಗೆ ವಹಿಸಲಾಗಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ ಸಂಖ್ಯೆ 1 ರಿಂದ 22 ರವರೆಗಿನ ಮೂಲದಾಖಲೆಗಳನ್ನು ಈ ಪತ್ರದೊಂದಿಗೆ ಹಿಂದಿರುಗಿಸಲಾಗಿದೆ)
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ.
6) ಶ್ರೀ ಹೊನ್ನೆಶಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ರಂಗಾಪುರ ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ.
7) ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.